ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	೮೦(೮೩೫)
2. ಮಾನ್ಯ ಸದಸ್ಯರ ಹೆಸರು	ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
3. ಉತ್ತರಿಸುವ ಸಚಿವರು	ಮಾನ್ಯ ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)
4. ಉತ್ತರಿಸಬೇಕಾದ ದಿನಾಂಕ	28-09-2020

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕರ್ನಾಟಕ ರಾಜ್ಯದಲ್ಲಿರುವ ಖಾಸಗಿ ವಿಶ್ವವಿದ್ಯಾಲಯಗಳು, ಡೀಮ್ಡ್ ಯುನಿವರ್ಸಿಟಿ ಹಾಗೂ ಸ್ವಾಯತ್ತ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು;	ರಾಜ್ಯದಲ್ಲಿ ಒಟ್ಟು 19 ಖಾಸಗಿ ವಿಶ್ವವಿದ್ಯಾಲಯಗಳು ಹಾಗೂ 16 ಡೀಮ್ಡ್ ವಿಶ್ವವಿದ್ಯಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಅವುಗಳ ವಿವರಗಳನ್ನು **ಅನುಬಂಧ** – 1ರಲ್ಲಿ ಒದಗಿಸಲಾಗಿದೆ.
ಆ)	ಸದರಿ ವಿಶ್ವವಿದ್ಯಾಲಯಗಳಿಗೆ ಯಾವ ಮಾನದಂಡದ ಆಧಾರದ ಮೇಲೆ ಸ್ಥಾಪನೆಗೆ ಅನುಮತಿ ನೀಡಲಾಗುತ್ತಿದೆ; (ವಿವರ ನೀಡುವುದು)	ಶಿಕ್ಷಣ ಕ್ಷೇತ್ರದಲ್ಲಿ ಗಣನೀಯ ಅನುಭವವಿರುವ ಸಂಸ್ಥೆಗಳ ವತಿಯಿಂದ UGC (Establishment of and maintenance of Standard in Private Universities) Regulations, 2003ರ ಮಾನದಂಡಗಳನುಸಾರ ಹಾಗೂ ಸರ್ಕಾರ ಆದೇಶ ಸಂಖ್ಯೆ: ಇಡಿ 449 ಯುಆರ್‌ಸಿ 2016, ದಿನಾಂಕ: 24.01.2017ರಲ್ಲಿನ ಮಾರ್ಗಸೂಚಿಗಳನುಸಾರ ಪ್ರತ್ಯೇಕ ಅಧಿನಿಯಮಗಳನ್ನು ರಚಿಸುವ ರಾಜ್ಯದಲ್ಲಿ ಖಾಸಗಿ ವಿಶ್ವವಿದ್ಯಾಲಯಗಳನ್ನು ಸ್ಥಾಪಿಸಲಾಗುತ್ತಿದೆ. ಅಲ್ಲದೇ ಸಂಬಂಧಪಟ್ಟ ಖಾಸಗಿ ವಿಶ್ವವಿದ್ಯಾಲಯದ ಅಧಿನಿಯಮದಲ್ಲಿ ಉಪಬಂಧಿಸಿರುವಂತೆ ಪ್ರದೇಶಕ್ಕನುಸಾರವಾಗಿ ಈ ಕೆಳಗೆ ನಿರ್ದಿಷ್ಟ ಪಡಿಸಿದ ವ್ಯಾಪ್ತಿಗೆ ಭೂಮಿಯ ಒಡೆತನವನ್ನು ಹೊಂದಿರಬೇಕಾಗಿರುತ್ತದೆ :- ಎ) ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಹಾಗೂ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ (BMRDA) ಪ್ರದೇಶದ ಮಿತಿಯೊಳಗಿದ್ದರೆ ಇಪ್ಪತ್ತೈದು ಎಕರೆಗಳು; (ಬಿ) ಭೂಮಿಯು ನಗರ ಪಾಲಿಕೆಗಳಾದ ಮೈಸೂರು, ಮಂಗಳೂರು, ಹುಬ್ಬಳ್ಳಿ-ಧಾರವಾಡ, ಬೆಳಗಾಂ, ಗುಲ್ಬರ್ಗಾ, ತುಮಕೂರು, ಬಳ್ಳಾರಿ, ಶಿವಮೊಗ್ಗ, ದಾವಣಗೆರೆ ಮತ್ತು ವಿಜಯಪುರಗಳ ಪ್ರದೇಶದ ಒಳಗೆ ಇದ್ದರೆ 35 ಎಕರೆಗಳು;

		(ಸಿ) ಭೂಮಿಯು (ಎ) ಮತ್ತು (ಬಿ) ಖಂಡಗಳಲ್ಲಿ ನಿರ್ದಿಷ್ಟಪಡಿಸಿದ ಸ್ಥಳಗಳನ್ನು ಹೊರತುಪಡಿಸಿದ್ದರೆ 50 ಎಕರೆಗಳಿಗಿಂತ ಕಡಿಮೆ ಇರತಕ್ಕದ್ದಲ್ಲ. ಮೇಲೆ ನಿರ್ದಿಷ್ಟಪಡಿಸಿದ ಭೂಮಿಯು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಹಾಗೂ ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ (BMRDA) ಪ್ರದೇಶದ ಮಿತಿಯೊಳಗಿದ್ದರೆ ಏಕ ಘಟಕ (ಸಿಂಗಲ್ ಬ್ಲಾಕ್) ಅಥವಾ ಎರಡು ಘಟಕ (Two Split pieces of land)ಗಳಲ್ಲಿ ಮತ್ತು ಇತರ ಪ್ರದೇಶಗಳಲ್ಲಿ ಏಕ ಘಟಕ (ಸಿಂಗಲ್ ಬ್ಲಾಕ್)ದಲ್ಲಿ ಇರಬೇಕಾಗಿದ್ದು, ಇದು ಸಂಬಂಧಪಟ್ಟ ನ್ಯಾಸ/ ಪ್ರತಿಷ್ಠಾನ/ ಸಂಸ್ಥೆ/ ವಿಶ್ವವಿದ್ಯಾಲಯದ ಹೆಸರಿನಲ್ಲಿರಬೇಕು. ಖಾಸಗಿ ವಿಶ್ವವಿದ್ಯಾಲಯವು, ಕನಿಷ್ಠ ಇಪ್ಪತ್ತೈದು ಕೋಟಿ ರೂಪಾಯಿಗಳನ್ನು ಒಂದು ಶಾಶ್ವತ ಶಾಸನಬದ್ಧ ದತ್ತಿ ನಿಧಿಯನ್ನು ಸ್ಥಾಪಿಸಬೇಕು, ಇದರ ಪೈಕಿ ಕನಿಷ್ಠ ಹದಿನೈದು ಕೋಟಿ ರೂಪಾಯಿಗಳು ನಗದು ರೂಪದಲ್ಲಿ ಮತ್ತು ಇನ್ನುಳಿದದ್ದು ಬ್ಯಾಂಕ್ ಗ್ಯಾರಂಟಿ ರೂಪದಲ್ಲಿ ಇರಬೇಕು ಮತ್ತು ಇದನ್ನು ತಾನಾಗಿಯೆ ಹೆಚ್ಚಿಸಬಹುದಾಗಿದ್ದು ಆದರೆ ಕಡಿಮೆ ಮಾಡತಕ್ಕದ್ದಲ್ಲ. ಆದರೆ, ಬೆಂಗಳೂರು ಅಥವಾ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊರಗಿರುವ ವಿಶ್ವವಿದ್ಯಾಲಯದ ಸಂದರ್ಭದಲ್ಲಿ ಕನಿಷ್ಠ ಹತ್ತು ಕೋಟಿ ರೂಪಾಯಿಗಳು ನಗದು ರೂಪದಲ್ಲಿರಬೇಕು ಮತ್ತು ಉಳಿದ ಐದು ಕೋಟಿ ರೂಪಾಯಿಗಳು ಬ್ಯಾಂಕ್ ಗ್ಯಾರಂಟಿಯ ರೂಪದಲ್ಲಿರಬೇಕು. ಮುಂದುವರೆದು, ವಿಶ್ವವಿದ್ಯಾಲಯ ಧನ ಸಹಾಯ ಆಯೋಗದ ಸಲಹೆಯ ಮೇರೆಗೆ ಕೇಂದ್ರ ಸರ್ಕಾರದಿಂದ ಯುಜಿಸಿ ಅಧಿನಿಯಮ-1956ರ ಪ್ರಕರಣ (3)ರನ್ವಯ Deemed to be Universities ಗಳನ್ನು ಸ್ಥಾಪಿಸಲಾಗುತ್ತದೆ. ಈ ಹಿನ್ನೆಲೆಯಲ್ಲಿ, Deemed to be Universities ಗಳು ರಾಜ್ಯ ಸರ್ಕಾರದ ಆಡಳಿತ ನಿಯಂತ್ರಣಕ್ಕೊಳಪಡುವುದಿಲ್ಲ. ಆದುದರಿಂದ, ಇವುಗಳಿಗೆ ಕೇಂದ್ರ ಸರ್ಕಾರವು ನಿರ್ದಿಷ್ಟ ಸರ್ಕಾರ (Appropriate Government) ಆಗಿರುತ್ತದೆ.
ಇ)	ಸದರಿ ವಿಶ್ವವಿದ್ಯಾಲಯಗಳಲ್ಲಿ ಸ್ಥಳೀಯರಿಗೆ ಎಷ್ಟು ಉದ್ಯೋಗ ನೀಡಲಾಗಿದೆ;	ವಿವರಗಳನ್ನು ಅನುಬಂಧ – 2ರಲ್ಲಿ ಒದಗಿಸಲಾಗಿದೆ.

ಈ)	ಸದರಿ ವಿಶ್ವವಿದ್ಯಾಲಯಗಳಲ್ಲಿ ಕನ್ನಡವನ್ನು ಒಂದು ಭಾಷೆಯಾಗಿ ಕಲಿಸಲಾಗುತ್ತಿದೆಯೇ ? (ವಿವರ ನೀಡುವುದು)	ವಿವರಗಳನ್ನು ಅನುಬಂಧ – 3ರಲ್ಲಿ ಒದಗಿಸಲಾಗಿದೆ.

ಸಂಖ್ಯೆ: ಇಡಿ/207/ಯುಆರ್‌ಸಿ/2020

(ಡಾ॥ ಅಶ್ವಥ್ ನಾರಾಯಣ ಸಿ.ಎನ್.)

ಉಪಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ, ಐಟಿ ಮತ್ತು ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ)

ಅನುಬಂಧ – 1

ಖಾಸಗಿ ವಿಶ್ವವಿದ್ಯಾಲಯಗಳ ವಿವರ

ಕ್ರ.ಸಂ.	ವಿಶ್ವವಿದ್ಯಾಲಯದ ಹೆಸರು
(1)	ಅಲಿಯನ್ಸ್ ವಿಶ್ವವಿದ್ಯಾಲಯ, ಬೆಂಗಳೂರು.
(2)	ಅಜೀಮ್ ಪ್ರೇಮ್‌ಜಿ ವಿಶ್ವವಿದ್ಯಾಲಯ, ಬೆಂಗಳೂರು.
(3)	ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ, ಬೆಂಗಳೂರು.
(4)	ಸಿ.ಎಂ.ಆರ್. ವಿಶ್ವವಿದ್ಯಾಲಯ, ಬೆಂಗಳೂರು.
(5)	ಪಿ.ಇ.ಎಸ್. ವಿಶ್ವವಿದ್ಯಾಲಯ, ಬೆಂಗಳೂರು.
(6)	ಎಂ.ಎಸ್.ರಾಮಯ್ಯ ಯೂನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸಸ್, ಬೆಂಗಳೂರು.
(7)	ರೇವಾ ವಿಶ್ವವಿದ್ಯಾಲಯ, ಬೆಂಗಳೂರು.
(8)	ದಯಾನಂದ ಸಾಗರ ವಿಶ್ವವಿದ್ಯಾಲಯ, ಬೆಂಗಳೂರು.
(9)	ರೈ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು.
(10)	ಕೆ.ಎಲ್.ಇ. ವಿಶ್ವವಿದ್ಯಾಲಯ, ಹುಬ್ಬಳ್ಳಿ.
(11)	ಜೆ.ಎಸ್.ಎಸ್. ತಾಂತ್ರಿಕ ವಿಶ್ವವಿದ್ಯಾಲಯ, ಮೈಸೂರು.
(12)	ಗಾರ್ಡನ್ ಸಿಟಿ ವಿಶ್ವವಿದ್ಯಾಲಯ, ಬೆಂಗಳೂರು.
(13)	ಶ್ರೀನಿವಾಸ ವಿಶ್ವವಿದ್ಯಾಲಯ, ಮಂಗಳೂರು
(14)	ಶರಣ ಬಸವ ವಿಶ್ವವಿದ್ಯಾಲಯ, ಕಲಬುರಗಿ
(15)	ಆದಿಚುಂಚನಗಿರಿ ವಿಶ್ವವಿದ್ಯಾಲಯ, ನಾಗಮಂಗಲ
(16)	ಖಾಜ ಬಂದಾನವಾಜ್ ವಿಶ್ವವಿದ್ಯಾಲಯ, ಕಲಬುರಗಿ
(17)	ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ, ಧಾರವಾಡ.
(18)	ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ, ಕಲಬುರಗಿ.
(19)	ಎನ್.ಐ.ಇ. ವಿಶ್ವವಿದ್ಯಾಲಯ, ಮೈಸೂರು.

ಡೀಮ್ಡ್ ವಿಶ್ವವಿದ್ಯಾಲಯಗಳ ವಿವರ

(1)	ಜೈನ್ ವಿಶ್ವವಿದ್ಯಾಲಯ, ಬೆಂಗಳೂರು.
(2)	ಕ್ರೈಸ್ಟ್ ವಿಶ್ವವಿದ್ಯಾಲಯ, ಬೆಂಗಳೂರು.
(3)	ಯೆನೆಪೋಯ ವಿಶ್ವವಿದ್ಯಾಲಯ, ದೇರಳಕಟ್ಟೆ, ಮಂಗಳೂರು.
(4)	ಸ್ವಾಮಿ ವಿವೇಕಾನಂದ ಯೋಗ ಅನುಸಂಧಾನ ಸಂಸ್ಥಾನ, ಗಿಡ್ಡೇನಹಳ್ಳಿ, ಬೆಂಗಳೂರು.
(5)	ಶ್ರೀ ಸಿದ್ಧಾರ್ಥ ಅಕಾಡೆಮಿ ಆಫ್ ಹೈಯರ್ ಎಜುಕೇಷನ್, ಅಗಲಕೋಟೆ, ತುಮಕೂರು.
(6)	ಶ್ರೀ ದೇವರಾಜ ಅರಸ್ ಅಕಾಡೆಮಿ ಆಫ್ ಹೈಯರ್ ಎಜುಕೇಷನ್ ಅಂಡ್ ರೀಸರ್ಚ್, ಕೋಲಾರ.
(7)	ನಿಟ್ಟೆ ವಿಶ್ವವಿದ್ಯಾಲಯ, ಮಂಗಳೂರು.
(8)	ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಮೆಂಟಲ್ ಹೆಲ್ತ್ ಅಂಡ್ ನ್ಯೂರೋ ಸೈನ್ಸಸ್, ಬೆಂಗಳೂರು.
(9)	ಮಣಿಪಾಲ ಅಕಾಡೆಮಿ ಆಫ್ ಹೈಯರ್ ಎಜುಕೇಷನ್, ಮಣಿಪಾಲ.
(10)	ಕೆ.ಎಲ್.ಇ. ಅಕಾಡೆಮಿ ಆಫ್ ಹೈಯರ್ ಎಜುಕೇಷನ್ ಅಂಡ್ ರೀಸರ್ಚ್, ಬೆಳಗಾಂ.
(11)	ಜವಾಹರ್‌ಲಾಲ್ ನೆಹರು ಸೆಂಟರ್ ಫಾರ್ ಅಡ್ವಾನ್ಸ್‌ಡ್ ಸೈಂಟಿಫಿಕ್ ರೀಸರ್ಚ್, ಜಕ್ಕೂರು, ಬೆಂಗಳೂರು.
(12)	ಜಗದ್ಗುರು ಶ್ರೀ ಶಿವರಾತ್ರೀಶ್ವರ ವಿಶ್ವವಿದ್ಯಾಲಯ, ಮೈಸೂರು.
(13)	ಇಂಟರ್‌ನ್ಯಾಷನಲ್ ಇನ್ಸ್‌ಟಿಟ್ಯೂಟ್ ಆಫ್ ಇನ್‌ಫರ್ಮೇಶನ್ ಟೆಕ್ನಾಲಜಿ, ಬೆಂಗಳೂರು.
(14)	ಇಂಡಿಯನ್ ಇನ್ಸ್‌ಟಿಟ್ಯೂಟ್ ಆಫ್ ಸೈನ್ಸ್, ಬೆಂಗಳೂರು.
(15)	ಬಿ.ಎಲ್.ಡಿ.ಇ. ವಿಶ್ವವಿದ್ಯಾಲಯ, ಬಿಜಾಪುರ.
(16)	ಆಂದ್ರ ಪ್ರದೇಶದ ವಿಶಾಖಪಟ್ಟಣದಲ್ಲಿ ಕೇಂದ್ರ ಸ್ಥಾನ ಹೊಂದಿರುವ ಡೀಮ್ಡ್ ವಿಶ್ವವಿದ್ಯಾಲಯವಾದ ಗಾಂಧಿ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್ ಮೆಂಟ್ (GITAM) ಇದರ ಆಫ್ ಕ್ಯಾಂಪಸ್ ಸೆಂಟರ್ ಬೆಂಗಳೂರಿನಲ್ಲಿರುತ್ತದೆ.

ಅನುಬಂಧ – 2

ಕ್ರಸಂ.	ವಿಶ್ವವಿದ್ಯಾಲಯದ ಹೆಸರು	ಸ್ಥಳೀಯರಿಗೆ ಉದ್ಯೋಗ ಅವಕಾಶವನ್ನು ಕಲ್ಪಿಸಲಾಗಿರುವ ಪ್ರಮಾಣ (ಶೇಕಡವಾರು)
(1)	ಅಲಿಯನ್ಸ್ ವಿಶ್ವವಿದ್ಯಾಲಯ, ಬೆಂಗಳೂರು.	63%
(2)	ಅಜೀಮ್ ಪ್ರೇಮ್‌ಜಿ ವಿಶ್ವವಿದ್ಯಾಲಯ, ಬೆಂಗಳೂರು.	60%
(3)	ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ, ಬೆಂಗಳೂರು.	75%
(4)	ಸಿ.ಎಂ.ಆರ್. ವಿಶ್ವವಿದ್ಯಾಲಯ, ಬೆಂಗಳೂರು.	90%
(5)	ಪಿ.ಇ.ಎಸ್. ವಿಶ್ವವಿದ್ಯಾಲಯ, ಬೆಂಗಳೂರು.	89% ಬೋಧಕ & 100% ಬೋಧಕೇತರ ಹುದ್ದೆಗಳು
(6)	ಎಂ.ಎಸ್.ರಾಮಯ್ಯ ಯೂನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸಸ್, ಬೆಂಗಳೂರು.	91%
(7)	ರೇವಾ ವಿಶ್ವವಿದ್ಯಾಲಯ, ಬೆಂಗಳೂರು.	70% ಬೋಧಕ & 85% ಬೋಧಕೇತರ ಹುದ್ದೆಗಳು
(8)	ದಯಾನಂದ ಸಾಗರ ವಿಶ್ವವಿದ್ಯಾಲಯ, ಬೆಂಗಳೂರು.	75% ಬೋಧಕ & 100% ಬೋಧಕೇತರ ಹುದ್ದೆಗಳು
(9)	ರೈ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು.	99%
(10)	ಕೆ.ಎಲ್.ಇ. ವಿಶ್ವವಿದ್ಯಾಲಯ, ಹುಬ್ಬಳ್ಳಿ	99%
(11)	ಜೆ.ಎಸ್.ಎಸ್. ತಾಂತ್ರಿಕ ವಿಶ್ವವಿದ್ಯಾಲಯ, ಮೈಸೂರು.	100%
(12)	ಗಾರ್ಡನ್ ಸಿಟಿ ವಿಶ್ವವಿದ್ಯಾಲಯ, ಬೆಂಗಳೂರು.	80%
(13)	ಶ್ರೀನಿವಾಸ ವಿಶ್ವವಿದ್ಯಾಲಯ, ಮಂಗಳೂರು	90%
(14)	ಶರಣ ಬಸವ ವಿಶ್ವವಿದ್ಯಾಲಯ, ಕಲಬುರಗಿ	100%
(15)	ಆದಿಚುಂಚನಗಿರಿ ವಿಶ್ವವಿದ್ಯಾಲಯ, ನಾಗಮಂಗಲ	95%
(16)	ಖಾಜ ಬಂದಾನವಾಜ್ ವಿಶ್ವವಿದ್ಯಾಲಯ, ಕಲಬುರಗಿ	95%
(17)	ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ, ಧಾರವಾಡ.	75%
(18)	ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ, ಕಲಬುರಗಿ.	50%
(19)	ಎನ್.ಐ.ಇ. ವಿಶ್ವವಿದ್ಯಾಲಯ, ಮೈಸೂರು.	ಎನ್.ಐ.ಇ. ವಿಶ್ವವಿದ್ಯಾಲಯವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 158 ಯುಆರ್‌ಸಿ 2019, ದಿನಾಂಕ: 29.06.2019ರನ್ವಯ 2019-20ನೇ ಶೈಕ್ಷಣಿಕ ಸಾಲಿನಿಂದ ಸ್ಥಾಪಿಸಲು ಸರ್ಕಾರದ ಅನುಮತಿಯನ್ನು ನೀಡಲಾಗಿರುತ್ತದೆ. ಅದರೆ, ಸದರಿ ವಿಶ್ವವಿದ್ಯಾಲಯದ ಆಡಳಿತಮಂಡಳಿಯವರು 2022ನೇ ಸಾಲಿನಿಂದ ವಿಶ್ವವಿದ್ಯಾಲಯವನ್ನು ಪ್ರಾರಂಭಿಸುವುದಾಗಿ ತಿಳಿಸಿರುತ್ತಾರೆ.

ಅನುಬಂಧ – 3

ಕ್ರಸಂ.	ವಿಶ್ವವಿದ್ಯಾಲಯದ ಹೆಸರು	ಕನ್ನಡವನ್ನು ಒಂದು ಭಾಷೆಯನ್ನಾಗಿ ಕಲಿಸಲಾಗುತ್ತಿರುವ ಬಗ್ಗೆ.
(1)	ಅಲಿಯನ್ಸ್ ವಿಶ್ವವಿದ್ಯಾಲಯ, ಬೆಂಗಳೂರು.	ಹೌದು
(2)	ಅಜೀಮ್ ಪ್ರೇಮ್‌ಜಿ ವಿಶ್ವವಿದ್ಯಾಲಯ, ಬೆಂಗಳೂರು.	ಓಪನ್ ಕೋರ್ಸುಗಳಲ್ಲಿ ಕನ್ನಡವನ್ನು ಕಲಿಸಲಾಗುತ್ತಿದೆ.
(3)	ಪ್ರೆಸಿಡೆನ್ಸಿ ವಿಶ್ವವಿದ್ಯಾಲಯ, ಬೆಂಗಳೂರು.	ಹೌದು
(4)	ಸಿ.ಎಂ.ಆರ್. ವಿಶ್ವವಿದ್ಯಾಲಯ, ಬೆಂಗಳೂರು.	ಹೌದು
(5)	ಪಿ.ಇ.ಎಸ್. ವಿಶ್ವವಿದ್ಯಾಲಯ, ಬೆಂಗಳೂರು.	ಹೌದು
(6)	ಎಂ.ಎಸ್.ರಾಮಯ್ಯ ಯೂನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸಸ್, ಬೆಂಗಳೂರು.	ಇಲ್ಲ
(7)	ರೇವಾ ವಿಶ್ವವಿದ್ಯಾಲಯ, ಬೆಂಗಳೂರು.	ಹೌದು
(8)	ದಯಾನಂದ ಸಾಗರ ವಿಶ್ವವಿದ್ಯಾಲಯ, ಬೆಂಗಳೂರು.	ಹೌದು
(9)	ರೈ ತಾಂತ್ರಿಕ ವಿಶ್ವವಿದ್ಯಾಲಯ, ಬೆಂಗಳೂರು.	ಹೌದು
(10)	ಕೆ.ಎಲ್.ಇ. ವಿಶ್ವವಿದ್ಯಾಲಯ, ಹುಬ್ಬಳ್ಳಿ	ಹೌದು
(11)	ಜೆ.ಎಸ್.ಎಸ್. ತಾಂತ್ರಿಕ ವಿಶ್ವವಿದ್ಯಾಲಯ, ಮೈಸೂರು.	ಹೌದು
(12)	ಗಾರ್ಡನ್ ಸಿಟಿ ವಿಶ್ವವಿದ್ಯಾಲಯ, ಬೆಂಗಳೂರು.	ಹೌದು
(13)	ಶ್ರೀನಿವಾಸ ವಿಶ್ವವಿದ್ಯಾಲಯ, ಮಂಗಳೂರು	ಹೌದು
(14)	ಶರಣ ಬಸವ ವಿಶ್ವವಿದ್ಯಾಲಯ, ಕಲಬುರಗಿ	ಹೌದು
(15)	ಆದಿಚುಂಚನಗಿರಿ ವಿಶ್ವವಿದ್ಯಾಲಯ, ನಾಗಮಂಗಲ	ಹೌದು
(16)	ಖಾಜ ಬಂದಾನವಾಜ್ ವಿಶ್ವವಿದ್ಯಾಲಯ, ಕಲಬುರಗಿ	ಹೌದು
(17)	ಶ್ರೀ ಧರ್ಮಸ್ಥಳ ಮಂಜುನಾಥೇಶ್ವರ ವಿಶ್ವವಿದ್ಯಾಲಯ, ಧಾರವಾಡ.	ಹೌದು
(18)	ಶ್ರೀ ಸತ್ಯ ಸಾಯಿ ಮಾನವ ಅಭ್ಯುದಯ ವಿಶ್ವವಿದ್ಯಾಲಯ, ಕಲಬುರಗಿ.	ಹೌದು
(19)	ಎನ್.ಐ.ಇ. ವಿಶ್ವವಿದ್ಯಾಲಯ, ಮೈಸೂರು.	ಎನ್.ಐ.ಇ. ವಿಶ್ವವಿದ್ಯಾಲಯವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 158 ಯುಆರ್‌ಸಿ 2019, ದಿನಾಂಕ: 29.06.2019ರನ್ವಯ 2019–20ನೇ ಶೈಕ್ಷಣಿಕ ಸಾಲಿನಿಂದ ಸ್ಥಾಪಿಸಲು ಸರ್ಕಾರದ ಅನುಮತಿಯನ್ನು ನೀಡಲಾಗಿರುತ್ತದೆ. ಆದರೆ, ಸದರಿ ವಿಶ್ವವಿದ್ಯಾಲಯದ ಆಡಳಿತಮಂಡಳಿಯವರು 2022ನೇ ಸಾಲಿನಿಂದ ವಿಶ್ವವಿದ್ಯಾಲಯವನ್ನು ಪ್ರಾರಂಭಿಸುವುದಾಗಿ ತಿಳಿಸಿರುತ್ತಾರೆ.